# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 525 |
| ಮಾನ್ಯ ಸದಸ್ಯರ ಹೆಸರು | : ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 12.12.2024 |
| ಉತ್ತರಿಸುವವರು | : ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು ವಿವರ ನೀಡುವುದು) | ಇಲಾಖಾವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಆ) | ರಾಜ್ಯದಲ್ಲಿ ಹಳೆಯ ಪಿಂಚಣಿ ಯೋಜನೆಗೆ ಒಳಪಟ್ಟ ನೌಕರರ ಸಂಖ್ಯೆ ಎಷ್ಟು; ಹೊಸ ಪಿಂಚಣಿ ಯೋಜನೆಗೆ (ಎನ್‌ಪಿಎಸ್) ಒಳಪಟ್ಟ ನೌಕರರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಹಳೆಯ ಪಿಂಚಣಿ ಯೋಜನೆಗೆ ಒಳಪಟ್ಟ ನೌಕರರ ಸಂಖ್ಯೆ – 2,29,497.<br>ದಿನಾಂಕ:30.11.2024ರವರೆಗೆ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಟ್ಟ ನೌಕರರ ಸಂಖ್ಯೆ – 2,82,536. |
| ಇ) | ಹೊಸ ಪಿಂಚಣಿ ಯೋಜನೆಗೆ ಒಳಪಟ್ಟ ಎಷ್ಟು ನೌಕರರು ಇಲ್ಲಿಯವರೆಗೆ ನಿವೃತ್ತರಾಗಿದ್ದಾರೆ; ಅವರು ಪಡೆಯುತ್ತಿರುವ ಕನಿಷ್ಠ ಮತ್ತು ಗರಿಷ್ಠ ನಿವೃತ್ತಿ ವೇತನವೆಷ್ಟು; | ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಟ್ಟ CRA ರವರಲ್ಲಿ ದಿನಾಂಕ:31.10.2024ರವರೆಗೆ ನೋಂದಣಿಯಾಗಿರುವ ನಿವೃತ್ತರಾಗಿರುವ ನೌಕರರ ಸಂಖ್ಯೆ – 2,054.<br><br>ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ (ಎಸ್.ಪಿ.ಎಲ್) 203 ಪಿಇಎನ್ 2012 (ಪಿ), ದಿನಾಂಕ: 18.05.2016 ಮತ್ತು ಸರ್ಕಾರದ ಆದೇಶ ಸಂ:ಆಇ 201 ಪಿಇಎನ್ 2021 ದಿನಾಂಕ:29.11.2021ರನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ನೌಕರರು ನಿವೃತ್ತರಾಗುವ ಸಮಯದಲ್ಲಿ ಖಾತೆಯಲ್ಲಿ 5 ಲಕ್ಷಕ್ಕಿಂತ ಕಡಿಮೆ ಮೊತ್ತವಿದ್ದರೆ ಸಂಪೂರ್ಣ ಮೊತ್ತವನ್ನು ನೌಕರರಿಗೆ CRA-Protean ರವರಿಂದ ಹಿಂದಿರುಗಿಸಲಾಗುವುದು. ಪ್ರಾನ್ ಖಾತೆಯಲ್ಲಿ 5 ಲಕ್ಷಕ್ಕಿಂತ ಹೆಚ್ಚಿನ ಮೊತ್ತವಿದ್ದರೆ ಪ್ರಾನ್ ಖಾತೆಯಲ್ಲಿ ಶೇ. 60ರಷ್ಟು ಮೊತ್ತವನ್ನು ನೌಕರರಿಗೆ ಹಿಂದಿರುಗಿಸಲಾಗುವುದು ಹಾಗೂ ಉಳಿದ ಶೇ.40ರಷ್ಟು ಮೊತ್ತವನ್ನು ASP (Annuity Service Provider) ಯಲ್ಲಿ ಹೂಡಿಕೆ ಮಾಡಿ ಮಾಸಿಕ ಪಿಂಚಣಿ ಪಡೆಯಬಹುದಾಗಿದೆ. |

| | | |
|---|---|---|
| | | ನಿವೃತ್ತ ನೌಕರರು ಆಯ್ಕೆ ಮಾಡಿಕೊಂಡಿರುವ ASP (Annuity Service Provider) ರವರಿಗೆ CRA-Protean ರವರಿಂದ ಶೇ.40 ರಷ್ಟು ಮೊತ್ತವನ್ನು ವರ್ಗಾಯಿಸಲಾಗುತ್ತದೆ. ಶೇ. 40 ರಷ್ಟು ಮೊತ್ತದ ಪ್ರಮಾಣ ನಿವೃತ್ತ ನೌಕರರು ಆಯ್ಕೆ ಮಾಡುವ Annuity Scheme ಅನ್ವಯ ASP ರವರು ಮಾಸಿಕ ಪಿಂಚಣಿಯನ್ನು ನಿಗಧಿಪಡಿಸುತ್ತಾರೆ. |
| ಈ) | ಹಳೆಯ ಪಿಂಚಣಿ ಮರು ಜಾರಿಗೆ ಸರ್ಕಾರ ಸಮಿತಿಯನ್ನು ರಚಿಸಿದೆಯೇ; ರಚಿಸಿದ್ದಲ್ಲಿ, ಇಲ್ಲಿಯವರೆಗೆ ಸದರಿ ಸಮಿತಿ ನಡೆಸಿದ ಸಭೆಗಳ ಸಂಖ್ಯೆ ಎಷ್ಟು; ಎಷ್ಟು ರಾಜ್ಯಗಳಿಗೆ ತೆರಳಿ ಅಧ್ಯಯನ ಮಾಡಿದ್ದಾರೆ; ಸದರಿ ಸಮಿತಿಗೆ ವರದಿ ನೀಡಲು ಯಾವ ಕಾಲಮಿತಿಯನ್ನು ನೀಡಲಾಗಿದೆ; | ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಯ ಬದಲಾಗಿ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಮಾಡುವ ಸಾಧ್ಯತೆಗಳ ಕುರಿತು ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024ರಲ್ಲಿ ಪುನರ್ ರಚಿಸಿ ಆದೇಶಿಸಲಾಗಿದೆ.<br><br>ಸದರಿ ಸಮಿತಿಯು ಈಗಾಗಲೇ ಎರಡು ಸಭೆಗಳನ್ನು ನಡೆಸಿದೆ.<br><br>ಇತರೆ ರಾಜ್ಯಕ್ಕೆ ತೆರಳಿ ಅಧ್ಯಯನ ನಡೆಸಲು ಒಂದು ತಂಡವನ್ನು ರಚಿಸಿ ಕಳುಹಿಸಲು ಕ್ರಮವಹಿಸಲಾಗುತ್ತಿದೆ.<br><br>ಸದರಿ ಸಮಿತಿಗೆ ಯಾವುದೇ ಕಾಲಮಿತಿಯನ್ನು ನಿಗಧಿಪಡಿಸಿರುವುದಿಲ್ಲ. |
| ಉ) | ಶೀಘ್ರವಾಗಿ ಹಳೆಯ ಪಿಂಚಣಿ ಯೋಜನೆ ಜಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | |

ಆಇ-ಪಿಇಎನ್/403/2024

(ಸಿದ್ಧರಾಮಯ್ಯ)
ಮುಖ್ಯಮಂತ್ರಿ